Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 21-12-2022

**ಪತ್ರಿಕಾ ಪ್ರಕಟಣೆ:**

# ತಾಂತ್ರಿಕ ಶಿಕ್ಷಣದ ಪರಿಭಾಷಾ ವಿಚಾರ ಸಂಕೀರ್ಣಕ್ಕೆ ಚಾಲನೆ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ಕೇಂದ್ರ ಶಿಕ್ಷಣ ಸಚಿವಾಲಯದ ವೈಜ್ಞಾನಿಕ ತಂತ್ರಜ್ಞಾನ ಮತ್ತು ಪರಿಭಾಷಾ ಆಯೋಗದ ಮಾರ್ಗದರ್ಶನದ ಮೇರೆಗೆ ತಾಂತ್ರಿಕ ಶಿಕ್ಷಣದ ಪರಿಭಾಷೆಯನ್ನು ಕನ್ನಡದಲ್ಲಿ ತೆರೆದಿಡುವ ಎರಡು ದಿನದ ವಿಚಾರ ಸಂಕೀರ್ಣ ಕಾರ್ಯಕ್ರಮವನ್ನು ಡಿಸೆಂಬರ್ 21 ರ ಬೆಳಿಗ್ಗೆ 11ಗಂಟೆಗೆ ಉದ್ಘಾಟಿಸಲಾಯಿತು. ಕಾರ್ಯಕ್ರಮಕ್ಕೆ ಗೌರವಾನ್ವಿತ ವ್ಯಕ್ತಿಗಳಾಗಿ ಆಗಮಿಸಿದ್ದ ಕೇಂದ್ರ ಶಿಕ್ಷಣ ಸಚಿವಾಲಯದ ವೈಜ್ಞಾನಿಕ ತಂತ್ರಜ್ಞಾನ ಮತ್ತು ಪರಿಭಾಷಾ ಆಯೋಗ (ಸಿ.ಎಸ್.ಟಿ.ಟಿ)ದ ಸಹಾಯಕ ನಿರ್ದೇಶಕರಾದ ಡಾ. ಸಂತೋಷ್ ಕುಮಾರ್ ಅವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತ ಸಿ. ಎಸ್. ಟಿ. ಟಿ. ಯ ಉದ್ದೇಶ ಮತ್ತು ಕಾರ್ಯವೈಕರಿಯನ್ನು ವಿವರಿಸಿದ್ದರು. ಸಿ.ಎಸ್.ಟಿ.ಟಿ. ಯು ಭಾರತದಲ್ಲಿ ಬಳಕೆಯಾಗುತ್ತಿರುವ 22ಕ್ಕೂ ಅಧಿಕ ಭಾಷೆಗಳಲ್ಲಿ ತಾಂತ್ರಿಕ ಪರಿಭಾಷಾ ಶಬ್ದಕೋಶ ರಚಿಸಿದೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಳಗಾವಿ ಗೋಗಟೆ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಜಯಂತ ಕಿತ್ತೂರ್ ಅವರು ಸಿ.ಎಸ್.ಟಿ.ಟಿ. ಯು ಕನ್ನಡ ಪರಿಭಾಷೆ ಶಬ್ದಕೋಶ ರಚಿಸಲು ಮುಂದಾಗಿರುವುದು ಶ್ಲಾಘನೀಯ ಎಂದು ಹೇಳಿದರು. ವಿಜ್ಞಾನ ಹಾಗೂ ತಾಂತ್ರಿಕ ಶಿಕ್ಷಣವನ್ನು ಪ್ರಾದೇಶಿಕ ಭಾಷೆಯಲ್ಲಿ ಕಲಿಯುವುದರಿಂದ ತುಂಬಾ ಅನುಕೂಲವಿದೆ ಎಂದು ಹೇಳಿದರು. ವೇದಿಕೆ ಮೇಲೆ ಉಪಸ್ಥಿತರಿದ್ದ ಮತ್ತೊಬ್ಬ ಅತಿಥಿಗಳಾದ ಬೆಂಗಳೂರಿನ ಸಂಸ್ಕೃತ ಭಾರತೀಯ ಸಂಕಲನಕಾರರಾದ ಡಾ. ಜನಾರ್ಧನ ಹೆಗಡೆ ಅವರು ಪರಿಭಾಷಾ ಶಬ್ದಕೋಶ ನಿರ್ಮಾಣಕ್ಕೆ ಸಂಸ್ಕೃತ ಭಾಷೆಯ ಅವಶ್ಯಕತೆ ಇದ್ದು, ಇದರಿಂದ ಶಬ್ದಕೋಶ ರಚನೆ ಸರಳವಾಗುವುದೆಂದು ನುಡಿದರು. ಇದೇ ಸಂದರ್ಭದಲ್ಲಿ ಗಣ್ಯರು ಹಾಗೂ ವಿಚಾರ ಸಂಕೀರ್ಣದ ಸಂಪನ್ಮೂಲ ವ್ಯಕ್ತಿಗಳಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರು ಹಾಗೂ ಆವಿಷ್ಕಾರ ಪರಿಷತ್ತಿನ ಅಧ್ಯಕ್ಷರು ಮತ್ತು ಈ ವಿಚಾರ ಸಂಕೀರ್ಣದ ಸಂಚಾಲಕರಾದ ಡಾ. ಮಹೇಂದ್ರ ದೀಕ್ಷಿತ್ ಅವರು ಗಣ್ಯರು ಹಾಗೂ ಸಂಪನ್ಮೂಲ ವ್ಯಕ್ತಿಗಳ ಕಿರುಪರಿಚೈಸುತ್ತ ಸಭಿಕರನ್ನು ಸ್ವಾಗತಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆಡಳಿತ ವಿಭಾಗದ ಮುಖ್ಯಸ್ಥರಾದ ಪ್ರೊ.ಮಂಜುನಾಥ ಡಿ ವಂದಿಸಿದರು. ಪ್ರೊ. ಭಾನುಪ್ರಿಯ ನಿರೂಪಿಸಿದರು. ವಿವಿಧ ಮಹಾವಿದ್ಯಾಲಯಗಳಿಂದ ಆಗಮಿಸಿದ 100ಕ್ಕೂ ಅಧಿಕ ಬೋಧಕ ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು ಎಂದು ಪ್ರಾಂಶುಪಾಲರಾದ ಡಾ. ವಿ. ಎ.ಕುಲಕರ್ಣಿ ಅವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು

**Principal**
**KLS Vishwanathrao Deshpande**
**Institute of Technology, Haliyal**




